## 81. ಸಂಚಾರಿ ಸ್ವ್ಯಾಬ್ ಬೂತ್‌ಗೆ ಚಾಲನೆ

ಬೆಂಗಳೂರು ನಗರದಲ್ಲಿ ಕೊರೋನಾ ಸೋಂಕಿತರು ಮತ್ತು ಶಂಕಿತರ ಮಾದರಿಗಳ ಪರೀಕ್ಷೆಯನ್ನು ತ್ವರಿತವಾಗಿ ನಡೆಸಲು ಅನುವಾಗುವಂತೆ ವಿಶಿಷ್ಟ ವಿನ್ಯಾಸದ ಸಂಚಾರಿ ಸ್ವ್ಯಾಬ್ ಸಂಗ್ರಹ ಬೂತ್‌ಗೆ ವೈದ್ಯಕೀಯ ಶಿಕ್ಷಣ ಸಚಿವ ಡಾ:ಕೆ.ಸುಧಾಕರ್ ಅವರು ಚಾಲನೆ ನೀಡಿದರು.

ಲ್ಯಾಮ್ ರಿಸರ್ಚ್ ಪ್ರೈವೇಟ್ ಲಿಮಿಟೆಡ್‌ನ ಇಂಜಿನಿಯರ್‌ಗಳು ಮತ್ತು ವಿವಿಧ ತಜ್ಞರ ಸಹಯೋಗದಲ್ಲಿ ಸಿದ್ಧಪಡಿಸಿರುವ ವಿಶಿಷ್ಟ ವಿನ್ಯಾಸದ ಗ್ಲೌಸ್ ಬಾಕ್ಸ್ ಟೆಸ್ಟಿಂಗ್ ಬೂತ್‌ಗಳನ್ನು ವಿಕ್ಟೋರಿಯಾ ಆಸ್ಪತ್ರೆ ಆವರಣದಲ್ಲಿ ಉದ್ಘಾಟಿಸಿದರು.

ಕಂಟೈನ್‌ಮೆಂಟ್ ಪ್ರದೇಶಕ್ಕೂ ತೆರಳಿ ಪರೀಕ್ಷಿಸುವ ಹಾಗೂ ಪರೀಕ್ಷೆಗೆ ಒಳಗಾಗುವವರಿಗೆ ಸೋಂಕು ತಗುಲುವ ಅಪಾಯವಿಲ್ಲದೆ ಸುರಕ್ಷಿತವಾಗಿ ಸ್ವಾಬ್ ಸಂಗ್ರಹಿಸಲು ಅನುವಾಗುವಂತೆ ಬೂತ್‌ನ್ನು ಸಿದ್ಧಪಡಿಸಿದ್ದಾರೆ. ಗ್ಲಾಸ್ ಬಾಕ್ಸ್ ಒಳಗಿನಿಂದ ಮಾದರಿಗಳನ್ನು ಸ್ವೀಕರಿಸುವ ವಿನ್ಯಾಸ ಹೊಂದಿರುವ ಈ ಬೂತ್‌ಗಳಲ್ಲಿ ಸೋಂಕಿತ ಅಥವಾ ಶಂಕಿತ ವ್ಯಕ್ತಿಗಳು ಹೊರಗಿನಿಂದಲೇ ಗಂಟಲು ದ್ರವ ಮಾದರಿ ನೀಡಬಹುದಾಗಿದೆ. ಅಲ್ಲದೆ, ನೇರ ಸಂಪರ್ಕವಿಲ್ಲದೆ ಶಂಕಿತರ ರಕ್ತ ಮಾದರಿಗಳನ್ನು ಪಡೆಯಬಹುದಾಗಿದೆ.

ಬೂತ್‌ನಿಂದಾಗಿ ಪಿಪಿಇ ಕಿಟ್ ಬಳಕೆಯ ಅಗತ್ಯತೆ ಇಲ್ಲದೆ ಕಡಿಮೆ ಸಿಬ್ಬಂದಿಯಿಂದಲೇ ಕಾರ್ಯನಿರ್ವಹಿಸಬಹುದು. ಇದರಿಂದ ಪರೀಕ್ಷಾ ವೆಚ್ಚವನ್ನು ಗಣನೀಯವಾಗಿ ಕಡಿಮೆ ಮಾಡಲಿವೆ. ಇದು ಕೊರೊನಾ ವಿರುದ್ಧದ ಸಮರದಲ್ಲಿ ಮಹತ್ವದ ಪಾತ್ರ ವಹಿಸಲಿದೆ. ಕೊರೊನಾ ವಿರುದ್ಧದ ಹೋರಾಟದಲ್ಲಿ ಆರಂಭದಿಂದಲೂ ಪರೀಕ್ಷೆಗೆ ಹೆಚ್ಚಿನ ಒತ್ತು ನೀಡುತ್ತಿರುವುದರಿಂದಲೇ ನಮ್ಮ ರಾಜ್ಯದಲ್ಲಿ ಮರಣ ಪ್ರಮಾಣ ಕಡಿಮೆಯಾಗಿದೆ ಎಂದರು.

ಬೂತ್‌ಗಳನ್ನು ಗಡಿಭಾಗದ ಚೆಕ್ ಪೋಸ್ಟ್‌ಗಳಲ್ಲಿ ಮತ್ತು ಸೋಂಕು ಹೆಚ್ಚಿರುವ ಹಾಟ್ ಸ್ಪಾಟ್‌ಗಳಲ್ಲಿ ಪರಿಣಾಮಕಾರಿಯಾಗಿ ಬಳಸಬಹುದು ಎಂದು ಸಲಹೆ ನೀಡಿದರು. ವಿಕ್ಟೋರಿಯಾ ಆವರಣದಲ್ಲಿ ನೂತನವಾಗಿ ನಿರ್ಮಿಸಲಾಗುತ್ತಿರುವ ಗ್ಯಾಸ್ಟ್ರೋಎಂಟೆರ್ನಾಲಜಿಯ ಕಟ್ಟಡದ ಪರಿವೀಕ್ಷಣೆ ಮತ್ತು ಕೊರೊನಾ ವಾರ್ಡ್ ಆಗಿ ಪರಿವರ್ತಿತವಾಗಿರುವ ಮಿಂಟೋ ಆಸ್ಪತ್ರೆಯನ್ನು ವೀಕ್ಷಿಸಿದರು.

ಆಧಾರ:ಕನ್ನಡಪ್ರಭ, ದಿನಾಂಕ:29.05.2020